**All India Radio: Bangalore**
**Regional Bulletin In Kannada**
**28.07.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**28.07.2025** **2.30 p.m.**

ಕಮುಖ್ಯಾಂಶಗಳು:

೧. ಮಂಡ್ಯದ ಮದ್ದೂರಿನಲ್ಲಿ ೧ ಸಾವಿರದ ೧೪೬ ಕೋಟಿ ರೂಪಾಯಿ ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಮುಖ್ಯಮಂತ್ರಿ ಶಂಕುಸ್ಥಾಪನೆ

೨. ೯೧ ಸಮುದಾಯಗಳ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಿಸಲು ಸರ್ಕಾರ ನಿರ್ಧಾರ

೩. ಆನೆಗಳನ್ನು ಕಾಡಿಗಟ್ಟಲು ಅರಣ್ಯಾಧಿಕಾರಿಗಳು ತುರ್ತು ಕ್ರಮವಹಿಸುವಂತೆ ಸಚಿವ ಈಶ್ವರ್ ಖಂಡ್ರೆ ಸೂಚನೆ

೪. ಬೆಂಗಳೂರಿನಲ್ಲಿ ಆಸ್ತಿ ತೆರಿಗೆ ಪಾವತಿಸದ ಮೂರು ಲಕ್ಷಕ್ಕೂ ಅಧಿಕ ಮಂದಿಗೆ ನೋಟಿಸ್ ಜಾರಿಗೊಳಿಸಲು ಬಿಬಿಎಂಪಿ ಆಯುಕ್ತರು ಸೂಚನೆ

೫. ಮೈಸೂರಿನಲ್ಲಿ ಮಾದಕ ದ್ರವ್ಯ ತಯಾರಿಕಾ ಘಟಕ ಪತ್ತೆ; ಪೊಲೀಸರಿಂದ ನಗರದಾದ್ಯಂತ ದಿಢೀರ್ ಕಾರ್ಯಾಚರಣೆ

><><><><><><><><><

ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಮಂಡ್ಯ ಜಿಲ್ಲೆಯ ಮದ್ದೂರು ವಿಧಾನಸಭಾ ಕ್ಷೇತ್ರದಲ್ಲಿ ೧ ಸಾವಿರದ ೧೪೬ ಕೋಟಿ ರೂಪಾಯಿ ಮೊತ್ತದ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಿದರು. ಬಳಿಕ ಅವರು ವಿವಿಧ ಯೋಜನೆಗಳ ಫಲಾನುಭವಿಗಳಿಗೆ ಆದೇಶಪತ್ರ ವಿತರಿಸಿದರು. ಬಳಿಕ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಮೈಸೂರಿನಿಂದ ಬೇರ್ಪಟ್ಟ ಮಂಡ್ಯ ಜಿಲ್ಲೆ ಇದೀಗ ಶಿಕ್ಷಣ, ರಾಜಕೀಯ, ಸಾಹಿತ್ಯದ ಮೂಲಕ ಬೆಳವಣಿಗೆ ಕಂಡಿದ್ದು ಅಪರೂಪದ ವೈಶಿಷ್ಟ್ಯಪೂರ್ಣ ಜಿಲ್ಲೆ ಎಂದು ಬಣ್ಣಿಸಿದರು. ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಚೆಲುವರಾಯಸ್ವಾಮಿ, ಸಚಿವರುಗಳಾದ ಹೆಚ್.ಸಿ.ಮಹದೇವಪ್ಪ, ವೆಂಕಟೇಶ್, ಕೃಷ್ಣಬೈರೇಗೌಡ, ದಿನೇಶ್ ಗುಂಡೂರಾವ್, ರಹೀಂ ಖಾನ್ ಸೇರಿದಂತೆ ಹಲವರು ಭಾಗವಹಿಸಿದ್ದರು.

><><><><><><><><><

ರಾಜ್ಯದಲ್ಲಿನ ನೇಕಾರರು, ಹಮಾಲರು, ಶಿಳ್ಳೆಕ್ಯಾತರು, ಗೊಂದಳೆ, ಮಡಿವಾಳ, ಸುಣಗಾರ ಮೊದಲಾದ ೬೯ ಸಮುದಾಯಗಳ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ ವಿತರಿಸಲಾಗುತ್ತಿದೆ ಎಂದು ಕಾರ್ಮಿಕ ಇಲಾಖೆ ಸಚಿವ ಸಂತೋಷ ಲಾಡ್ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಸುದ್ಧಿಗಾರರೊಂದಿಗೆ ಮಾತನಾಡಿದ ಅವರು, ಒಟ್ಟು ೫೨ ಲಕ್ಷ ಕಾರ್ಮಿಕರ ಗುರುತಿನ ಚೀಟಿಗಳಲ್ಲಿ ಸುಮಾರು ೧೦ ಲಕ್ಷ ಅನಧಿಕೃತ ಚೀಟಿಗಳೆಂದು ಗುರುತಿಸಿ ನಿಷೇಧಿಸಲಾಗಿದೆ. ಕಾರ್ಡಗಳಿಗೆ ಅರ್ಜಿ ಸಲ್ಲಿಸಿದವರ ಮಾಹಿತಿಗಳ ಬಗ್ಗೆ ಅಂಬೇಡ್ಕರ್ ಸೇವಾ ಕೇಂದ್ರದ ವಾಹನ ಸಂಚಾರ ಮೂಲಕ ಪರಿಶೀಲಿಸುವ ಕಾರ್ಯ ನಡೆಯಲಿದೆ. ಆನ್‌ಲೈನ್ ಮೂಲಕ ಪರಿಶೀಲನೆ ನಡೆಯುವುದರಿಂದ ಅಧಿಕೃತವಾದ ಕಾರ್ಮಿಕರನ್ನು ಗುರುತಿಸಲು ಸಾಧ್ಯವಾಗಲಿದೆ ಎಂದು ತಿಳಿಸಿದ್ದಾರೆ.

><><><><><><><><><

ಅಸಂಘಟಿತ ಕಾರ್ಮಿಕರ ರಾಷ್ಟ್ರೀಯ ದತ್ತಾಂಶ ಸಿದ್ಧಪಡಿಸಲು ಕೇಂದ್ರ ಸರ್ಕಾರದ ಕಾರ್ಮಿಕ ಮತ್ತು ಉದ್ಯೋಗ ಮಂತ್ರಾಲಯ ಇ-ಶ್ರಮ್ ಪೋರ್ಟ್‌ಲ್ ಅಭಿವೃದ್ಧಿಪಡಿಸಿದೆ. ಈ ಪೋರ್ಟಲ್‌ನಲ್ಲಿ ಕಟ್ಟದ ಮತ್ತು ಇತರೆ ನಿರ್ಮಾಣ ಕಾರ್ಮಿಕರು, ಕೃಷಿ ಕಾರ್ಮಿಕರು, ಮೀನುಗಾರರು, ಆಶಾ ಕಾರ್ಯಕರ್ತೆಯರು, ಮನೆ ಕೆಲಸದ ಕಾರ್ಮಿಕರು, ಚಾಲಕರು, ಟೇಲರ್‌ಗಳು, ಬೀದಿಬದಿಯ ವ್ಯಾಪಾರಿಗಳು ಸೇರಿದಂತೆ. ಕೇಂದ್ರ ಸರ್ಕಾರವು ಗುರುತಿಸಿರುವ ೩೭೬ ವರ್ಗಗಳ ಕಾರ್ಮಿಕರು ನೋಂದಣಿ ಮಾಡಿಕೊಳ್ಳಬಹುದಾಗಿದೆ ಎಂದು ವಿಜಯಪುರ ಜಿಲ್ಲಾ ಕಾರ್ಮಿಕ ಇಲಾಖೆಯ ಅಧಿಕಾರಿ ಉಮಾಶ್ರೀ ಎಸ್.ಕೋಳಿ ತಿಳಿಸಿದ್ದಾರೆ. ಒಂದು ವರ್ಷದ ಅವಧಿಗೆ ಪ್ರಧಾನಮಂತ್ರಿ ಸುರಕ್ಷಾ ಭೀಮಾ ಯೋಜನೆಯ ಪ್ರಯೋಜನವನ್ನು ಪಡೆಯಬಹುದು ಎಂದು ಹೇಳಿದ್ದಾರೆ.

**ಧ್ವನಿ : ಉಮಾಶ್ರೀ ಎಸ್.ಕೋಳಿ, ಜಿಲ್ಲಾ ಕಾರ್ಮಿಕ ಇಲಾಖೆಯ ಅಧಿಕಾರಿ (೧೮ ಸೆಕೆಂಡುಗಳು)**

><><><><><><><><><

ಮಾನವ-ವನ್ಯಜೀವಿ ಸಂಘರ್ಷ ಇರುವ ವಲಯಗಳಲ್ಲಿ ಉನ್ನತಾಧಿಕಾರಿಗಳು ಸತತ ನಿಗಾ ಇಟ್ಟು, ಜನರ ಅಮೂಲ್ಯ ಜೀವ ಮತ್ತು ರೈತರ ಬೆಳೆ ರಕ್ಷಣೆಗೆ ಎಲ್ಲಾ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಅರಣ್ಯ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ. ಚಿಕ್ಕಮಗಳೂರು ಜಿಲ್ಲೆ, ಎನ್.ಆರ್. ಪುರ ತಾಲೂಕು ಬಾಳೆ ಹೊನ್ನೂರು ಬಳಿ ಕಳೆದ ೪ ದಿನಗಳ ಅಂತರದಲ್ಲಿ ಆನೆದಾಳಿಯಿಂದ ಇಬ್ಬರು ಮೃತಪಟ್ಟಿರುವ ಬಗ್ಗೆ ಸಂತಾಪ ವ್ಯಕ್ತಪಡಿಸಿದ್ದಾರೆ. ಆನೆಗಳು ನಾಡಿನಲ್ಲಿ ಕಾಣಿಸಿಕೊಂಡ ಕೂಡಲೇ ಅರಣ್ಯಾಧಿಕಾರಿಗಳು ಕ್ರಮವಹಿಸಬೇಕು. ಸ್ಥಳೀಯರಿಗೆ ಮಾಹಿತಿ ನೀಡಿ ಆನೆಗಳನ್ನು ಕಾಡಿಗೆ

ಮರಳಿಸಲು ತುರ್ತು ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದ್ದಾರೆ. ಆನೆ ಕಂದಕಗಳು ಸತತ ಮಳೆಯಿಂದ ಮುಚ್ಚಿಹೋಗಿವೆ, ಸೌರ ತಂತಿ ಬೇಲಿ, ಟೆಂಟಕಲ್ ಫೆನ್ಸಿಂಗ್ ಮರಬಿದ್ದು ಸಂಪರ್ಕ ಕಡಿದುಕೊಂಡಿದ್ದು, ಕೂಡಲೇ ಇವುಗಳ ನಿರ್ವಹಣೆ ಮಾಡಬೇಕು ಎಂದು ಸೂಚಿಸಿದ್ದಾರೆ.  ಆನೆಗಳಿಂದ ಹೆಚ್ಚಿನ ಸಾವು ಸಂಭವಿಸುತ್ತಿದ್ದು, ಹೆಚ್ಚುವರಿ ರೈಲ್ವೆ ಬ್ಯಾರಿಕೇಡ್ ನಿರ್ಮಾಣಕ್ಕೆ ಅನುಮೋದನೆ ನೀಡಲಾಗಿದೆ. ಕೂಡಲೇ ವಿಸ್ತೃತ ಯೋಜನಾ ವರದಿ ಸಿದ್ಧಪಡಿಸಿ, ಕಾಮಗಾರಿ ಆರಂಭಿಸಿ, ನಿಗದಿತ ಕಾಲಮಿತಿಯಲ್ಲಿ ಕಾಮಾಗಾರಿ ಪೂರ್ಣಗೊಳಿಸಿ ಜನರ ಅಮೂಲ್ಯ ಜೀವ ಮತ್ತು ರೈತರ ಬೆಳೆ ರಕ್ಷಣೆಗೆ ಅರಣ್ಯ ಸಿಬ್ಬಂದಿ ಮುಂದಾಗಬೇಕು ಎಂದು ತಿಳಿಸಿದ್ದಾರೆ.

><><><><><><><><><

ಬಿಬಿಎಂಪಿ ವ್ಯಾಪ್ತಿಯಲ್ಲಿ ಬಾಕಿ ಆಸ್ತಿ ತೆರಿಗೆ ಪಾವತಿಸದ ಸುಮಾರು ೩ ಲಕ್ಷ ೭೫ ಸಾವಿರ ಸುಸ್ತಿದಾರಿಗೆ ನೋಟಿಸ್ ಜಾರಿ ಮಾಡಿ ಬಾಕಿ ತೆರಿಗೆ ವಸೂಲಿ ಮಾಡಲು ಬಿಬಿಎಂಪಿ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಬಿಬಿಎಂಪಿ ವ್ಯಾಪ್ತಿಯಲ್ಲಿ ವಿವಿಧ ವಿಷಯಗಳಿಗೆ ಸಂಬಂಧಿಸಿದಂತೆ ಸಭೆ ನಡೆಸಿ ಮಾತನಾಡಿದ ಅವರು, ನಗರದಲ್ಲಿ ಪರಿಣಾಮಕಾರಿಯಾಗಿ ಆಸ್ತಿ ತೆರಿಗೆ ಸಂಗ್ರಹಿಸಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.೩ಲಕ್ಷದ ೭೫ ಸಾವಿರದ ಸುಸ್ತಿದಾರರು ಸುಮಾರು ೭೦೦ ರಿಂದ ೮೦೦ ಕೋಟಿ ರೂಪಾಯಿ ಪಾಲಿಕೆಗೆ ಬಾಕಿ ಆಸ್ತಿ ತೆರಿಗೆ ಪಾವತಿಸಬೇಕಿದ್ದು, ಈ ನಿಟ್ಟಿನಲ್ಲಿ ಎಸ್.ಎಂ.ಎಸ್ ಹಾಗೂ ಇಮೇಲ್ ಮೂಲಕ ನೋಟೀಸ್ ಜಾರಿ ಮಾಡಲಾಗುವುದು ಎಂದು ತಿಳಿಸಿದ್ದಾರೆ.  ಬಿಬಿಎಂಪಿ ವ್ಯಾಪ್ತಿಯಲ್ಲಿ ನಾಗರಿಕರು ಎ-ಖಾತಾಗಳನ್ನು ಪಡೆಯಲು ಅರ್ಜಿ ಸಲ್ಲಿಸುವ ಸಲುವಾಗಿ ಶೀಘ್ರ ಆನ್‌ಲೈನ್ ವ್ಯವಸ್ಥೆ ಜಾರಿಗೊಳಿಸಲು ಸೂಚನೆ ನೀಡಿದ್ದಾರೆ.

><><><><><><><><><

ಮೈಸೂರಿನಲ್ಲಿ ಮಾದಕ ದ್ರವ್ಯ ತಯಾರಿಕಾ ಘಟಕ ಪತ್ತೆಯಾಗಿದೆ. ಈ ಹಿನ್ನೆಲೆಯಲ್ಲಿ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ಮೈಸೂರು ಪೊಲೀಸರು  ನಗರದಾದ್ಯಂತ ದಿಢೀರ್ ಕಾರ್ಯಾಚರಣೆ ನಡೆಸಿ ತಪಾಸಣೆ ಕೈಗೊಂಡಿದ್ದಾರೆ. ಮೈಸೂರು ನಗರ ಪೊಲೀಸ್ ಕಮಿಷನರ್ ಸೀಮಾ ಲಾಟ್ಕರ್ ಕಳೆದ ರಾತ್ರಿ ಮಂಡಿ ಮೊಹಲಾದಲ್ಲಿ ದಾಳಿ ನಡೆಸಿದ್ದಾರೆ. ಕಾರ್ಯಾಚರಣೆ ವೇಳೆ ೧೮ ಮಂದಿ ಗಾಂಜಾ ಸೇವಿಸಿದವರು ಪತ್ತೆಯಾಗಿದ್ದಾರೆ. ಓರ್ವ ಮಾದಕ ದ್ರವ್ಯ ಮಾರಾಟಗಾರನನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಹಾಸ್ಟೆಲ್ ಗಳು ಸೇರಿದಂತೆ ಹಲವು ಕಡೆ ಪೊಲೀಸರು ತಪಾಸಣೆ ನಡೆಸಿದ್ದು ಈ ಹಿಂದೆ ಗಾಂಜಾ ಮಾರಾಟ ಮಾಡುತ್ತಿದ್ದ ೩೫ ಜನರನ್ನ ವಿಚಾರಣೆಗೊಳಪಡಿಸಿದ್ದಾರೆ.

><><><><><><><><><

ರಾಜ್ಯದ ವಿವಿಧೆಡೆ ಮಳೆಯಾಗುತ್ತಿದ್ದು ನದಿಗಳು ತುಂಬಿ ಹರಿಯುತ್ತಿವೆ. ಬಹುತೇಕ ಜಲಾಶಯಗಳು ಭರ್ತಿಯಾಗಿವೆ. ಮಡಿಕೇರಿ ಸೇರಿದಂತೆ ಕೊಡಗು ಜಿಲ್ಲೆಯಲ್ಲಿ ವರುಣನ ಆರ್ಭಟ ಇಂದು ಕೂಡ ಮುಂದುವರೆದಿದೆ. ಗಾಳಿ ಸಹಿತ ಧಾರಾಕಾರ ಮಳೆಯಾಗುತ್ತಿದ್ದು, ಅನೇಕ ಕಡೆ ಶಿಥಿಲಾವಸ್ಥೆಯಲ್ಲಿದ್ದ ಮನೆಗಳು ಬಿದ್ದಿವೆ. ಹಲವು ಗ್ರಾಮಗಳಿಗೆ ವಿದ್ಯುತ್ ಸಂಪರ್ಕ ವ್ಯತ್ಯಯವಾಗಿದೆ. ಮಳೆ, ಬಿರುಗಾಳಿ ಹಿನ್ನಲೆಯಲ್ಲಿ ಇಂದು ಕೂಡ ಜಿಲ್ಲೆಯ ಶಿಕ್ಷಣ ಸಂಸ್ಥೆಗಳಿಗೆ ಜಿಲ್ಲಾಡಳಿತ ರಜೆ ನೀಡಿದೆ.

><><><><><><><><><

ಕಾವೇರಿ ಜಲಾನಯನ ಪ್ರದೇಶದಲ್ಲಿ ನಿರಂತರ ಮಳೆಯಾಗುತ್ತಿರುವ ಹಿನ್ನಲೆಯಲ್ಲಿ ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲ್ಲೂಕಿನ ಕೃಷ್ಣರಾಜ ಸಾಗರ ಅಣೆಕಟ್ಟೆಗೆ ಹೆಚ್ಚಿನ ನೀರು ಹರಿದು ಬರುತ್ತಿದ್ದು, ಈ ವರ್ಷದಲ್ಲಿ ಎರಡನೇ ಬಾರಿಗೆ ಭರ್ತಿಯಾಗಿದೆ. ಕಳೆದ ಜೂನ್ ಅಂತ್ಯದಲ್ಲಿ ಭರ್ತಿಯಾಗಿದ್ದ ಅಣೆಕಟ್ಟೆಗೆ ಸಿಎಂ ಸಿದ್ದರಾಮಯ್ಯ ಬಾಗಿನ ಅರ್ಪಿಸಿದ್ದರು. ಇದೀಗ ಒಳಹರಿವಿನ ಪ್ರಮಾಣ ಹೆಚ್ಚಾಗಿರುವುದರಿಂದ ಪ್ರವಾಹದ ಭೀತಿ ಎದುರಾಗಿದೆ. ಈ ನಿಟ್ಟಿನಲ್ಲಿ ಅಣೆಕಟ್ಟೆಯಿಂದ ನದಿಗೆ ಸುಮಾರು ೮೫ ಸಾವಿರ ಕ್ಯೂಸೆಕ್ ನೀರು ಬಿಡಲಾಗುತ್ತಿದೆ.

><><><><><><><><><

ಪ್ರಧಾನಿ ನರೇಂದ್ರ ಮೋದಿ ದೇಶವನ್ನು ಉದ್ದೇಶಿಸಿ ಮಾತನಾಡಿದ 'ಮನ್ ಕೀ ಬಾತ್' ಕಾರ್ಯಕ್ರಮದಲ್ಲಿ ಮಂಗಳೂರಿನಲ್ಲಿ ನಡೆಯುತ್ತಿರುವ ತ್ಯಾಜ್ಯ ನಿರ್ವಹಣೆ ಬಗ್ಗೆ ಪ್ರಸ್ತಾಪಿಸಿ ಶ್ಲಾಘನೆ ವ್ಯಕ್ತಪಡಿಸಿದ್ದಾರೆ. ಮಂಗಳೂರಿನಲ್ಲಿ ಅತ್ಯಾಧುನಿಕ ರೀತಿಯ ನಡೆಯುವ ತ್ಯಾಜ್ಯ ನಿರ್ವಹಣೆಯನ್ನು ಮಾದರಿ ಎಂಬರ್ಥದಲ್ಲಿ ಪ್ರಸ್ತಾಪಿಸಿದ್ದಾರೆ. ಇದು ಜಿಲ್ಲೆಗೆ ಹೆಮ್ಮೆಯ ವಿಷಯ ಎಂದು ಮಂಗಳೂರು ನಗರದಲ್ಲಿ ತ್ಯಾಜ್ಯ ನಿರ್ವಹಣೆ ಮಾಡುತ್ತಿರುವ ಮಂಗಳಾ ರಿಸೋರ್ಸ್ ಮೆನೇಜ್‌ಮೆಂಟ್ ಪ್ರೈವೇಟ್ ಲಿಮಿಟೆಡ್ ಅಧ್ಯಕ್ಷ ದಿಲ್‌ರಾಜ್ ಆಳ್ವ ಸಂತಸ ವ್ಯಕ್ತಪಡಿಸಿದ್ದಾರೆ.

**ಧ್ವನಿ : ದಿಲ್‌ರಾಜ್ ಆಳ್ವ, ಮಂಗಳಾ ರಿಸೋರ್ಸ್ ಮೆನೇಜ್‌ಮೆಂಟ್ ಪ್ರೈವೇಟ್ ಲಿಮಿಟೆಡ್ ಅಧ್ಯಕ್ಷ (೨೮ ಸೆಕೆಂಡುಗಳು)**

><><><><><><><><><